ತುಮಕೂರು ಜಿಲ್ಲೆಯಲ್ಲಿ ವೈದ್ಯರ ನೇಮಕಾತಿ.

1808 - ಶ್ರೀ ಹೆಚ್. ಬಿ. ನಂಜೇಗೌಡ (ತುರುವೇಕೆರೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ತುಮಕೂರು ಜಿಲ್ಲೆಯಲ್ಲಿನ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು? ಈ ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?*

2. *ತುರುವೇಕೆರೆ ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು? ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು?*

ಶ್ರೀ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1. ತುಮಕೂರು ಜಿಲ್ಲೆಯ ಆಸ್ಪತ್ರೆಗಳಲ್ಲಿ 5 ವೈದ್ಯರ ಹುದ್ದೆಗಳು ಖಾಲಿ ಇರುತ್ತವೆ. ಸೇವಾನಿರತ ವೈದ್ಯಾಧಿಕಾರಿಗಳು ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬಂದಾಗ ಅವರನ್ನು ನೇಮಕ ಮಾಡುವ ಮೂಲಕ ಹುದ್ದೆಗಳನ್ನು ತುಂಬಲಾಗುವುದು.

2. ತುರುವೇಕೆರೆ ತಾಲ್ಲೂಕಿನಲ್ಲಿ ವೈದ್ಯರ ಹುದ್ದೆ ಖಾಲಿ ಇರುವುದಿಲ್ಲ.

ತುರುವೇಕೆರೆ ತಾಲ್ಲೂಕಿಗೆ ಉಪನ್ಯಾಸಕರ ನೇಮಕಾತಿ.

1809 - ಶ್ರೀ ಹೆಚ್. ಬಿ. ನಂಜೇಗೌಡ (ತುರುವೇಕೆರೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತುರುವೇಕೆರೆ ತಾಲ್ಲೂಕಿನಲ್ಲಿರುವ ಎಲ್‌ಪಿಎಸ್ ಮತ್ತು ಹೆಚ್‌ಪಿಎಸ್ ಶಾಲೆಗಳೆಷ್ಟು? ಈ ಶಾಲೆಗಳಲ್ಲಿ ಖಾಲಿ ಇರುವ ಉಪಾಧ್ಯಾಯರ ಹುದ್ದೆಗಳ ಸಂಖ್ಯೆ ಎಷ್ಟು? ಖಾಲಿ ಇರುವ ಉಪಾಧ್ಯಾಯರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?*

ಆ) *ಈ ಶಾಲೆಗಳು ತಮ್ಮದೇ ಆದ ಸ್ವಂತ ಕಟ್ಟಡಗಳನ್ನು ಹೊಂದಿದೆಯೇ? ಇಲ್ಲದಿದ್ದಲ್ಲಿ ಸ್ವಂತ ಕಟ್ಟಡಗಳನ್ನು ಒದಗಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ತುರುವೇಕೆರೆ ತಾಲ್ಲೂಕಿನಲ್ಲಿ 216 ಸರ್ಕಾರಿ ಎಲ್‌ಪಿಎಸ್ ಶಾಲೆಗಳು ಹಾಗೂ 103 ಹೆಚ್‌ಪಿಎಸ್ ಶಾಲೆಗಳಿವೆ. ಎಲ್‌ಪಿಎಸ್ ಶಾಲೆಗಳಲ್ಲಿ 26 ಹಾಗೂ ಹೆಚ್‌ಪಿಎಸ್ ಶಾಲೆಗಳಲ್ಲಿ 7 ಉಪಾಧ್ಯಾಯರ ಹುದ್ದೆಗಳು ಖಾಲಿ ಇವೆ. ಈ ಖಾಲಿ ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ಭರ್ತಿ ಮಾಡಲಾಗುವುದು.

ಆ) ಇತ್ತೀಚೆಗೆ ಪ್ರಾರಂಭವಾಗಿರುವ 30 ಎಲ್‌ಪಿಎಸ್ ಶಾಲೆಗಳು ವಿನಃ ಉಳಿದ ಎಲ್ಲಾ ಶಾಲೆಗಳಿಗೆ ಸ್ವಂತ ಕಟ್ಟಡಗಳು ಇವೆ. 30 ಶಾಲೆಗಳಿಗೂ ಕ್ರಿಯಾ ಯೋಜನೆಯಡಿಯಲ್ಲಿ ಆದ್ಯತೆಯ ಮೇಲೆ ಕಟ್ಟಡ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.